# Bangalore
# Regional News
# 03.02.2025 / 14.30 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

೧. ವಿಧಾನಸೌಧ ಆವರಣದಲ್ಲಿ ಇದೇ ೨೭ ರಿಂದ ಪುಸ್ತಕ ಹಾಗೂ ಸಾಹಿತ್ಯ ಉತ್ಸವ ನಡೆಸಲು ಸರ್ಕಾರ ನಿರ್ಧಾರ

೨. ಬೆಂಗಳೂರಿನಲ್ಲಿ ಕರ್ನಾಟಕ ಮಾಧ್ಯಮ ಅಕಾಡೆಮಿ ಪ್ರಶಸ್ತಿ ಪ್ರದಾನ; ೮೬ ಪತ್ರಕರ್ತರಿಗೆ ಗೌರವ

೩. ಕೇಂದ್ರದ ವರಿಷ್ಠರ ತೀರ್ಮಾನದಂತೆ ಬಿಜೆಪಿ ರಾಜ್ಯಾಧ್ಯಕ್ಷರ ಆಯ್ಕೆ; ಬಿ.ವೈ.ವಿಜಯೇಂದ್ರ

೪. ಚಿಕ್ಕಮಗಳೂರು ಜಿಲ್ಲೆಯಲ್ಲಿ ಏಳು ಮಂಗನ ಕಾಯಿಲೆ ಪತ್ತೆ; ಸೋಂಕಿತರಿಗೆ ಪ್ರತ್ಯೇಕ ವಾರ್ಡ್‌ನಲ್ಲಿ ಚಿಕಿತ್ಸೆ

**<><*<><>*><>**

ಸಣ್ಣ ಹಣಕಾಸು ಸಂಸ್ಥೆಗಳ ಹಾವಳಿ ತಡೆಗೆ ಈಗಾಗಲೇ ಸುಗ್ರೀವಾಜ್ಞೆ ರೂಪಿಸಿದ್ದು, ಶೀಘ್ರದಲ್ಲೇ ರಾಜ್ಯಪಾಲರು ಅಂಕಿತ ಹಾಕಲಿದ್ದಾರೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅನಾರೋಗ್ಯದಿಂದ ವಿಶ್ರಾಂತಿಯಲ್ಲಿದ್ದು, ಕರಡು ಪ್ರತಿಗೆ ಸಹಿ ಮಾಡಿ ಕಳುಹಿಸಿದ ಬಳಿಕ, ರಾಜ್ಯಪಾಲರ ಅಧಿಕೃತ ಪ್ರಕಟಣೆ ಹೊರಬೀಳಲಿದೆ ಎಂದು ತಿಳಿಸಿದ್ದಾರೆ. ಸಣ್ಣ ಹಣಕಾಸು ಸಂಸ್ಥೆಗಳ ಕಿರುಕುಳ ತಡೆಗೆ ಪೊಲೀಸರು ಅಗತ್ಯ ಕ್ರಮಗಳನ್ನು ಕೈಗೊಳ್ಳುವಲ್ಲಿ ನಿರತರಾಗಿದ್ದಾರೆ. ಯಾವುದಾದರೂ ಕಂಪನಿಗಳು ಕಿರುಕುಳ ನೀಡಿದರೆ, ಅವುಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

**<><*<><>*><>**

ಬಡವರ ರಕ್ಷಣೆ ಸರ್ಕಾರದ ಕರ್ತವ್ಯವಾಗಿದ್ದು, ಸಾಲ ವಸೂಲಿ ಹೆಸರಲ್ಲಿ ಸಣ್ಣ ಹಣಕಾಸು ಸಂಸ್ಥೆಗಳಿಂದ ಬಡವರಿಗೆ ಆಗುತ್ತಿರುವ ಕಿರುಕುಳ ತಪ್ಪಿಸಲು ಸರ್ಕಾರ ಸುಗ್ರೀವಾಜ್ಞೆ ರೂಪಿಸಿದೆ" ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ

ಸುದ್ದಿಗಾರರೊಂದಿಗೆ ಮಾತನಾಡಿದ ಅವರುಸಣ್ಣ ಹಣಕಾಸು ಸಂಸ್ಥೆಗಳನ್ನು ನಿಯಂತ್ರಿಸಲು ಪೊಲೀಸರಿಗೆ ಹೆಚ್ಚಿನ ಅಧಿಕಾರ ನೀಡಲಾಗುವುದು" ಎಂದು ಸ್ಪಷ್ಟಪಡಿಸಿದ್ದಾರೆ. ಇದೇ ವೇಳೆ ರಾಜ್ಯ ದಿವಾಳಿಯಾಗಿದೆ ಎಂಬ ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರ ಹೇಳಿಕೆ ಬಗ್ಗೆ ಪ್ರತಿಕ್ರಿಯಿಸಿ, "ಕೇಂದ್ರ ಸರ್ಕಾರ ಎಷ್ಟು ಲಕ್ಷ ಕೋಟಿ ರೂಪಾಯಿ ಸಾಲ ಮಾಡಿದೆ ಎಂಬುದನ್ನು ಮೊದಲು ಅರಿಯಬೇಕು ಎಂದು ತಿಳಿಸಿದ್ದಾರೆ. ರಾಜ್ಯ ಸರ್ಕಾರ ಬೆಲೆ ಏರಿಕೆ ಹಾಗೂ ನಿರುದ್ಯೋಗ ಸಮಸ್ಯೆಯಿಂದ ಬಳಲಿದ್ದ ಜನಸಾಮಾನ್ಯರಿಗೆ ನೆರವಾಗಲು ಗ್ಯಾರಂಟಿ ಯೋಜನೆ ಘೋಷಣೆ ಮಾಡಿದೆಯೇ ಹೊರತು, ಮತಕ್ಕಾಗಿ ಅಲ್ಲ. ಕೇಂದ್ರ ಸರ್ಕಾರದ ಬಜೆಟ್‌ನಲ್ಲಿ ರಾಜ್ಯಕ್ಕೆ ಯಾವ ಕೊಡುಗೆ ನೀಡಿದ್ದಾರೆ ಎಂಬ ಬಗ್ಗೆ ಮೊದಲು ಪಟ್ಟಿ ನೀಡಲಿ ಎಂದು ಹೇಳಿದ್ದಾರೆ.

<><*<><>*><>

ಸಾಹಿತಿಗಳು, ಬರಹಗಾರರು ಹಾಗೂ ವಿದ್ವಾಂಸರನ್ನು ವಿಧಾನ ಸೌಧದ ಹತ್ತಿರವಾಗಿಸುವ ಉದ್ದೇಶದಿಂದ ಇದೇ ೨೭ರಿಂದ ಮಾರ್ಚ್ ೩ರವರೆಗೆ .ಮೊದಲ ಬಾರಿಗೆ ವಿಧಾನ ಸೌಧದ ಆವರಣದಲ್ಲಿ ಪುಸ್ತಕ ಮತ್ತು ಸಾಹಿತ್ಯ ಉತ್ಸವ ಆಯೋಜಿಸಲಾಗಿದೆ ಎಂದು ವಿಧಾನಸಭಾ ಅಧ್ಯಕ್ಷ ಯು.ಟಿ.ಖಾದರ್ ತಿಳಿಸಿದ್ದಾರೆ. ಮಂಗಳೂರಿನಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಉತ್ಸವದ ಜತೆ ಆಹಾರ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳೂ ನಡೆಯಲಿದೆ. ಪುಸ್ತಕ ಉತ್ಸವದಲ್ಲಿ ಶೇಕಡ ೮೦ರಷ್ಟು ಕನ್ನಡ ಹಾಗೂ ಶೇಕಡ ೨೦ರಷ್ಟು ಇತರ ಭಾಷೆಗಳ ಪುಸ್ತಕಗಳ ಮಳಿಗೆಗಳಿಗೆ ಅವಕಾಶ ಕಲ್ಪಿಸಲಾಗುವುದು. ಸುಮಾರು ೧೫೦ರಷ್ಟು ಮಳಿಗೆಗಳ ವ್ಯವಸ್ಥೆ ಮಾಡಲಾಗುತ್ತಿದ್ದು, ಸಾರ್ವಜನಿಕರ ಪ್ರವೇಶಕ್ಕೆ ಮುಕ್ತ ಅವಕಾಶ ಕಲ್ಪಿಸಲಾಗುತ್ತದೆ ಎಂದು ಮಾಹಿತಿ ನೀಡಿದ್ದಾರೆ. ಉತ್ಸವದಲ್ಲಿ ಸಾಹಿತಿಗಳು ಬರೆದ ಪುಸ್ತಕ ಬಿಡುಗಡೆಗೆ ವೇದಿಕೆ ಕಲ್ಪಿಸುವ ಜತೆಗೆ ಅತ್ಯುತ್ತಮ ಸಾಹಿತಿಯೊಬ್ಬರಿಗೆ ಪ್ರಶಸ್ತಿ ನೀಡುವ ಬಗ್ಗೆಯೂ ನಿರ್ಧರಿಸಲಾಗಿದೆ. ಉತ್ಸವದಲ್ಲಿ ಸಾಹಿತ್ಯಕ್ಕೆ ಸಂಬಂಧಿಸಿ ಚರ್ಚೆಗೆ ಅವಕಾಶ ಕಲ್ಪಿಸಲಾಗುತ್ತಿದೆ. ಪುಸ್ತಕ ಉತ್ಸವದಲ್ಲಿ ಇತರ ಕಡೆಗಿಂತ ಗ್ರಾಹಕರಿಗೆ ರಿಯಾಯಿತಿ ದರದಲ್ಲಿ ಪುಸ್ತಕ ಒದಗಿಸಲು ಪುಸ್ತಕ ಮಾರಾಟಗಾರರಿಗೆ ಸೂಚನೆ ನೀಡಲಾಗಿದೆ ಎಂದು ಸಭಾಧ್ಯಕ್ಷ ಯು.ಟಿ.ಖಾದರ್ ತಿಳಿಸಿದ್ದಾರೆ.

<><*<><>*><>

ಬೆಂಗಳೂರಿನಲ್ಲಿ ನಡೆದ ಕರ್ನಾಟಕ ಮಾಧ್ಯಮ ಅಕಾಡೆಮಿ ವತಿಯಿಂದ ನೀಡಲಾಗುವ ೨೦೨೩ ಮತ್ತು ೨೦೨೪ನೇ ಸಾಲಿನ ವಾರ್ಷಿಕ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಉದ್ಘಾಟಿಸಿದರು. ಈ ಬಾರಿಯ ಮಾಧ್ಯಮ ಅಕಾಡೆಮಿ ಪ್ರಶಸ್ತಿಯನ್ನು ೮೬

ಮಂದಿಗೆ ಪ್ರದಾನ ಮಾಡಲಾಯಿತು. ಜೀವಮಾನ ಸಾಧನೆ ಪ್ರಶಸ್ತಿಗೆ ಪತ್ರಕರ್ತ ಅ.ಚ. ಶಿವಣ್ಣ, ಅಬ್ಬುಸ್ಸಲಾಂ ಪುತ್ತಿಗೆ, ಸಿದ್ದಯ್ಯ ಹಿರೇಮಠ್, ಶಶಿಕಾಂತ್ ಶೆಂಬೆಳ್ಳಿ ಸೇರಿ ೬೦ ಮಂದಿಗೆ ನೀಡಿ, ಗೌರವಿಸಲಾಯಿತು. ಇದೇ ವೇಳೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಾತನಾಡಿ, ಗ್ರಾಮೀಣ ಮತ್ತು ನಗರ ಪ್ರದೇಶದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪತ್ರಕರ್ತರಿಗೆ ನಿವೇಶನ ನೀಡಲು ಸರ್ಕಾರದಿಂದ ಯೋಜನೆ ರೂಪಿಸಲಾಗುವುದು ಎಂದು ಹೇಳಿದರು. ಸಮಾಜದಲ್ಲಿ ನಡೆಯುವ ಟೀಕೆ ಟಿಪ್ಪಣಿಗಳನ್ನು ಸರಿಪಡಿಸುವ ಕಾರ್ಯವನ್ನು ಪತ್ರಕರ್ತರು ಮಾಡುತ್ತಿದ್ದಾರೆ ಎಂದು ತಿಳಿಸಿದರು.

<><*<><>*><>

ಭಾರತೀಯ ಬಾಹ್ಯಾಕಾಶ ಸಂಸ್ಥೆಯ ಬಹು ನಿರೀಕ್ಷಿತ ನೂರನೇ ಎನ್‌ವಿಎಸ್-೦೨ ಉಪಗ್ರಹದಲ್ಲಿ ತಾಂತ್ರಿಕ ದೋಷ ಕಂಡಿಬಂದಿದೆ ಎಂದು ಇಸ್ರೋ ತಿಳಿಸಿದೆ. ಈ ಕುರಿತು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಮಾಹಿತಿ ಹಂಚಿಕೊಂಡಿರುವ ಇಸ್ರೋ, ಬಾಹ್ಯಾಕಾಶ ನೌಕೆಯಲ್ಲಿರುವ ಥ್ರಸ್ಟರ್‌ಗಳನ್ನು ಸಿಡಿಸುವ ವೇಳೆ ಆಕ್ಸಿಡೈಸರ್ ಪ್ರವೇಶಿಸುವ ಕವಾಟಗಳು ತೆರೆಯದ ಕಾರಣ ಸಮಸ್ಯೆ ಎದುರಾಗಿದೆ. ಈ ಹಿನ್ನೆಲೆಯಲ್ಲಿ ಉಪಗ್ರಹವನ್ನು ನಿಗದಿತ ಕಕ್ಷೆಯ ಸ್ಥಳದಲ್ಲಿ ಇರಿಸುವ 'ಕಕ್ಷೆಗೇರಿಸುವ ಕಾರ್ಯಾಚರಣೆ'ಯನ್ನು ಕೈಗೊಳ್ಳಲು ಸಾಧ್ಯವಾಗಲಿಲ್ಲ. ಹಾಸನದಲ್ಲಿರುವ ಉಪಗ್ರಹಗಳ ಮೇಲ್ವಿಚಾರಣೆ ಕೇಂದ್ರದಲ್ಲಿ ಎನ್‌ವಿಎಸ್-೦೨ ರ ಕಾರ್ಯವೈಖರಿಯನ್ನು ಪರಿಶೀಲಿಸಲಾಗುತ್ತಿದೆ. ಉಪಗ್ರಹವನ್ನು ಕ್ರಿಯಾತ್ಮಕಗೊಳಿಸಲು ಪರ್ಯಾಯ ತಂತ್ರಗಳನ್ನು ರೂಪಿಸಲಾಗುತ್ತಿದೆ ಎಂದು ಇಸ್ರೋ ಸ್ಪಷ್ಟಪಡಿಸಿದೆ.

<><*<><>*><>

ರಾಜ್ಯ ಬಿಜೆಪಿಯಲ್ಲಿ ಆಂತರಿಕ ಪ್ರಜಾಪ್ರಭುತ್ವವಿದ್ದು, ಸಣ್ಣಪುಟ್ಟ ಗೊಂದಲಗಳು ಇನ್ನು ಕೆಲವೇ ದಿನಗಳಲ್ಲಿ ಬಗೆಹರಿಯಲಿವೆ ಎಂದು ಬಿಜೆಪಿಯ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಸ್ಪಷ್ಟಪಡಿಸಿದ್ದಾರೆ. ಶಿವಮೊಗ್ಗದಲ್ಲಿ ಮಾತನಾಡಿದ ಅವರು, ಬಿಜೆಪಿಯಲ್ಲಿರುವ ಆಂತರಿಕ ಪ್ರಜಾಪ್ರಭುತ್ವ ವ್ಯವಸ್ಥೆ ಬೇರಾವುದೇ ರಾಜಕೀಯ ಪಕ್ಷದಲ್ಲಿ ಇಲ್ಲ. ಹೀಗಾಗಿ ಕೇಂದ್ರ ವರಿಷ್ಠರ ತೀರ್ಮಾನದಂತೆ ಬಿಜೆಪಿ ರಾಜ್ಯಾಧ್ಯಕ್ಷರ ಆಯ್ಕೆ ನಡೆಯಲಿದೆ ಎಂದು ತಿಳಿಸಿದ್ದಾರೆ. ಒಂದು ವಾರದಲ್ಲಿ ಯಾರು ಅಧ್ಯಕ್ಷರಾಗುತ್ತಾರೆ ಎಂಬುದಕ್ಕೆ ಉತ್ತರ ಸಿಗಲಿದೆ ಎಂದು ಅವರು ಹೇಳಿದ್ದಾರೆ.

ಧ್ವನಿ: ವಿಜಯೇಂದ್ರ, ಬಿಜೆಪಿ ರಾಜ್ಯಾಧ್ಯಕ್ಷ

<><*<><>*><>

ಚಿಕ್ಕಮಗಳೂರು ಜಿಲ್ಲೆಯಲ್ಲಿ ಒಟ್ಟು ೭ ಮಂಗನ ಕಾಯಿಲೆ ಪ್ರಕರಣಗಳು ಪತ್ತೆಯಾಗಿದ್ದು. ಸೋಂಕಿತರನ್ನು ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಜಿಲ್ಲೆಯ ಕೊಪ್ಪ, ಶೃಂಗೇರಿ, ಎನ್.ಆರ್.ಪುರ, ತಾಲೂಕುಗಳಲ್ಲಿ ಕೆ.ಎಫ್.ಡಿ ಪತ್ತೆಯಾಗಿದ್ದು ಸೋಂಕಿತರಿಗೆ ಕೊಪ್ಪ, ಶೃಂಗೇರಿ ಹಾಗು ಎನ್.ಆರ್.ಪುರ ಸರ್ಕಾರಿ ಆಸ್ಪತ್ರೆಗಳಲ್ಲಿ ಪ್ರತ್ಯೇಕ ವಾರ್ಡ್ ತೆರೆದು ಚಿಕಿತ್ಸೆ ನೀಡಲಾಗುತ್ತಿದೆ. ಕೆಲವರು ಗುಣಮುಖರಾಗಿದ್ದು ಹೆಚ್ಚಿನ ಚಿಕಿತ್ಸೆ ಆಗತ್ಯ ಇರುವವರಿಗೆ ಮಣಿಪಾಲ್ ಆಸ್ಪತ್ರೆಗೆ ದಾಖಲಿಸಿ ಉಚಿತವಾಗಿ ಚಿಕಿತ್ಸೆ ಕೊಡಿಸುವ ವ್ಯವಸ್ಥೆ ಮಾಡಲಾಗಿದೆ. ಈ ಬಗ್ಗೆ ಆಕಾಶವಾಣಿಯೊಂದಿಗೆ ಮಾತನಾಡಿದ ಜಿಲ್ಲಾ ಕುಟುಂಬ ಕಲ್ಯಾಣ ಮತ್ತು ಆರೋಗ್ಯ ಇಲಾಖೆ ಅಧಿಕಾರಿ ಡಾ.ಆಶ್ವಥ್ ಬಾಬು, ಗ್ರಾಮೀಣ ಭಾಗದ ಜನರು ಕಾಡು ಹಾಗೂ ತೋಟಗಳಿಗೆ ತೆರಳುವಾಗ ಉಣ್ಣೆಗಳು ಕಡಿಯದಂತೆ ಎಚ್ಚರ ವಹಿಸಬೇಕು ಎಂದು ಸೂಚಿಸಿದ್ದಾರೆ.

ಧ್ವನಿ: ಡಾ.ಅಶ್ವಥ್ ಬಾಬು,

<><*<><>*><>

ರಾಷ್ಟ್ರೀಯ ಕುಷ್ಠರೋಗ ನಿರ್ಮೂಲನಾ ಕಾರ್ಯಕ್ರಮದಡಿ ಡಿಸೆಂಬರ್ ಅಂತ್ಯದವರೆಗೆ ದಾವಣಗೆರೆ ಜಿಲ್ಲೆಯಲ್ಲಿ ೪೫ ಹೊಸ ಕುಷ್ಠರೋಗ ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆ ಎಂದು ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ.ಮಂಜುನಾಥ ಪಾಟೀಲ್ ತಿಳಿಸಿದ್ದಾರೆ. ಹಳೆಯ ಪ್ರಕರಣಗಳಲ್ಲಿ ಈಗಾಗಲೇ ೫೭ ರೋಗಿಗಳು ಔಷಧೋಪಚಾರ ಪಡೆಯುತ್ತಿದ್ದು, ೫೯ ಮಂದಿ ಸಂಪೂರ್ಣ ಗುಣಮುಖರಾಗಿದ್ದಾರೆ. ಪ್ರಕರಣಗಳ ಪತ್ತೆಗಾಗಿ ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರನ್ನು ಬಳಸಿಕೊಳ್ಳಲಾಗುತ್ತಿದ್ದು, ಜಾಗೃತಿ ಕಾರ್ಯಕ್ರಮಗಳು ನಿರಂತರವಾಗಿ ನಡೆದಿವೆ ಎಂದು ಸ್ಪಷ್ಟಪಡಿಸಿದ್ದಾರೆ.

<><*<><>*><>

ಹಾವೇರಿ ಪ್ರಾದೇಶಿಕ ಸಾರಿಗೆ ಕಚೇರಿ ವತಿಯಿಂದ ರಾಷ್ಟ್ರೀಯ ರಸ್ತೆ ಸುರಕ್ಷತಾ ಮಾಸಾಚರಣೆ ಅಂಗವಾಗಿ ಹಾವೇರಿಯಲ್ಲಿಂದು ಆಯೋಜಿಸಲಾದ ಬೈಕ್ ರ್‍ಯಾಲಿಗೆ ಪೊಲೀಸ್ ಉಪ ಅಧೀಕ್ಷಕ ಎಂ.ಎಸ್.ಪಾಟೀಲ್ ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿದರು. ಪ್ರಾದೇಶಿಕ ಸಾರಿಗೆ ಕಚೇರಿ ಆವರಣದಿಂದ ಆರಂಭವಾದ ಬೈಕ್ ರ್‍ಯಾಲಿ ಹಾವೇರಿಯ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿತು. ಸಾರ್ವಜನಿಕರಿಗೆ ರಸ್ತೆ ಸುರಕ್ಷತಾ ನಿಯಮಗಳ ಕುರಿತು ಧ್ವನಿವರ್ಧಕ ಹಾಗೂ ಭಿತ್ತಿಪತ್ರಗಳ ಮೂಲಕ ಜಾಗೃತಿ ಮೂಡಿಸಲಾಯಿತು.

<><*<><>*><>

ಕೊಡವರ ಅಸ್ತಿತ್ವ ಮತ್ತು ಭದ್ರತೆಯ ನಿಟ್ಟಿನಲ್ಲಿ ಸರ್ಕಾರದ ಗಮನ ಸೆಳೆಯಲು ಅಖಿಲ ಕೊಡವ ಸಮಾಜದ ವತಿಯಿಂದ ಕೊಡಗಿನಲ್ಲಿ ಪಾದಯಾತ್ರೆ ನಡೆಯಿತು. ಗಡಿಗ್ರಾಮವಾದ ಕುಟ್ಟದಿಂದ ಪ್ರಾರಂಭವಾದ ಪಾದಯಾತ್ರೆಗೆ ಉತ್ತಮ ಪ್ರತಿಕ್ರಿಯೆ ಕಂಡು ಬಂದಿದ್ದು, ಸಾವಿರಾರು ಸಂಖ್ಯೆಯಲ್ಲಿ ಕೊಡವರು, ಕೊಡವ ಭಾಷಿಕ ಜನಾಂಗದವರು ಪಾದಯಾತ್ರೆಯಲ್ಲಿ ಹೆಜ್ಜೆ ಹಾಕುತ್ತಿದ್ದಾರೆ. ಕುಟ್ಟದಿಂದ ೮೨ ಕಿಲೋಮೀಟರ್ ಅಂತರದ ಮಡಿಕೇರಿಯವರೆಗೆ ೬ ದಿನಗಳು ಪಾದಯಾತ್ರೆ ನಡೆಯಲಿದೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>